# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 157

ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 05-07-2023

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ರಾಜ್ಯದಲ್ಲಿರುವ ಒಟ್ಟು ಬಸ್‌ಗಳ ಸಂಖ್ಯೆ ಎಷ್ಟು; ಜನಸಂಖ್ಯೆಗೆ ಅನುಗುಣವಾಗಿ ಬಸ್‌ಗಳು ಸಂಚರಿಸುತ್ತಿವೆಯೇ; ಇಲ್ಲವಾದಲ್ಲಿ ಇನ್ನು ಎಷ್ಟು ಹೆಚ್ಚುವರಿ ಬಸ್‌ಗಳ ಅವಶ್ಯಕತೆ ಇದೆ; ರಾಜ್ಯದ ಜನತೆಯ ಸುಲಭ ಸಂಚಾರಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;</td><td>
ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿರುವ ನಿಗಮವಾರು ಬಸ್‌ಗಳ ಸಂಖ್ಯೆ ಈ ಕೆಳಕಂಡಂತಿದೆ:-
<table>
<tr><th>ನಿಗಮ</th><th>ಬಸ್‌ಗಳ ಸಂಖ್ಯೆ</th><th>ಅವಶ್ಯವಿರುವ ಹೆಚ್ಚುವರಿ ಬಸ್ಸುಗಳ ಸಂಖ್ಯೆ</th></tr>
<tr><td>ಕ.ರಾ.ರ.ಸಾ.ನಿಗಮ</td><td>8143</td><td>2250</td></tr>
<tr><td>ಬೆಂ.ಮ.ಸಾ.ಸಂಸ್ಥೆ</td><td>6607</td><td>1891</td></tr>
<tr><td>ವಾ.ಕ.ರ.ಸಾ.ಸಂಸ್ಥೆ</td><td>4856</td><td>1000</td></tr>
<tr><td>ಕ.ಕ.ರ.ಸಾ.ನಿಗಮ</td><td>4566</td><td>655</td></tr>
<tr><td>ಒಟ್ಟು</td><td>24172</td><td>5796</td></tr>
</table>
ರಾಜ್ಯದ ಜನತೆಯ ಸುಲಭ ಸಂಚಾರಕ್ಕೆ ಕೈಗೊಂಡಿರುವ ಕ್ರಮಗಳು :
ಕ.ರಾ.ರ.ಸಾ.ನಿಗಮದಲ್ಲಿ 620 ಬಸ್‌ಗಳನ್ನು ಖರೀದಿಸಲು ಹಾಗೂ 300 ಎಲೆಕ್ಟ್ರಿಕ್ ಬಸ್‌ಗಳನ್ನು ಜಿ.ಸಿ.ಸಿ. ಮಾದರಿಯಲ್ಲಿ ಕಾರ್ಯಾಚರಿಸಲು ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.
ಸಾರಿಗೆ ಸೌಲಭ್ಯವಿಲ್ಲದ ಗ್ರಾಮಗಳಿಗೆ ಬೇಡಿಕೆಗೆ ಅನುಗುಣವಾಗಿ ಮಾರ್ಗ ಸಮೀಕ್ಷೆ ಕೈಗೊಂಡು, ಸಾರಿಗೆ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
ಬೆಂ.ಮ.ಸಾ.ಸಂಸ್ಥೆ:
ಬೆಂ.ಮ.ಸಾ.ಸಂಸ್ಥೆಯಲ್ಲಿ 921 ಜಿ.ಸಿ.ಸಿ. ಮಾದರಿಯ ಎಲೆಕ್ಟ್ರಿಕ್ ಬಸ್‌ಗಳನ್ನು ಸೇರ್ಪಡೆಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಇದರೊಂದಿಗೆ, 840 ಡೀಸಲ್ ಬಸ್‌ಗಳನ್ನು ಖರೀದಿಸಲು , 100 ಜಿ.ಸಿ.ಸಿ. ಮಾದರಿ ಮಿನಿ ಎಲೆಕ್ಟ್ರಿಕ್ ಬಸ್ಸುಗಳನ್ನು ಕಾರ್ಯಾಚರಿಸಲು ಮತ್ತು 20 ಮಿನಿ ಎಲೆಕ್ಟ್ರಿಕ್ ಬಸ್ಸುಗಳನ್ನು ಖರೀದಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.
<ul><li>ಪ್ರಯಾಣಿಕರ ಬೇಡಿಕೆ ಹಾಗೂ ಒತ್ತಡಕ್ಕನುಗುಣವಾಗಿ ಹೊಸ ಮಾರ್ಗಗಳನ್ನು ಪರಿಚಯಿಸಿ, ವಿವಿಧ ಪಾಳಿಗಳಲ್ಲಿ ಸಾರಿಗೆ ಸೇವೆಗಳನ್ನು ಕಾರ್ಯಾಚರಣೆಗೊಳಿಸಲಾಗುತ್ತಿದೆ.</li></ul>
</td></tr>
</table>

| | | |
|---|---|---|
| | | • ಪ್ರಯಾಣಿಕರ ಬೇಡಿಕೆ ಮತ್ತು ಅವಶ್ಯಕತೆಗನುಗುಣವಾಗಿ ಅನುಸೂಚಿಗಳ ಪರಿಷ್ಕರಣೆ/ವಿಸ್ತರಣೆ/ರದ್ದತಿಗೊಳಿಸಲಾಗುತ್ತಿದೆ.<br>• ಮೆಟ್ರೋ ರೈಲು ಪ್ರಯಾಣಿಕರಿಗೆ ಮೆಟ್ರೋ ರೈಲು ನಿಲ್ದಾಣದಿಂದ ವಾಸಸ್ಥಳಗಳಿಗೆ ತಲುಪಲು (first and last mile connectivity) ಮೆಟ್ರೋ ಫೀಡರ್ ಸೇವೆಗಳನ್ನು ಒದಗಿಸಲಾಗುತ್ತಿದೆ.<br>• ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಕರನ್ನು ಆಕರ್ಷಿಸಲು ಮಾಸಿಕ, ದಿನದ ಹಾಗೂ ವಾರದ ಪಾಸುಗಳನ್ನು ವಿತರಿಸಲಾಗುತ್ತಿದೆ.<br>• ಸಂಸ್ಥೆಯು ಸಾರ್ವಜನಿಕ ಪ್ರಯಾಣಿಕರ ಅನುಕೂಲ/ಅವಶ್ಯಕತೆಗೆ ತಕ್ಕಂತೆ ಮಾಸಿಕ ಪಾಸುಗಳನ್ನು ಪಡೆಯಲು ಅನುವಾಗುವಂತೆ ದಿನಾಂಕವಾರು ಮಾಸಿಕ ಪಾಸುಗಳನ್ನು ವಿತರಣೆ ಮಾಡಲು ಕ್ರಮ ಕೈಗೊಂಡಿರುತ್ತದೆ.<br><br>**ವಾ.ಕ.ರ.ಸಾ.ಸಂಸ್ಥೆ:**<br>285 ಬಿ.ಎಸ್.-6 ಡೀಸಲ್ ಬಸ್‌ಗಳನ್ನು ಖರೀದಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>**ಕ.ಕ.ರ.ಸಾ.ನಿಗಮ:**<br>802 ಬಸ್‌ಗಳನ್ನು ಖರೀದಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>ನಾಲ್ಕು ಸಾರಿಗೆ ಸಂಸ್ಥೆಗಳ ಆಯ್ದ ಸಾರಿಗೆಗಳಲ್ಲಿ ದಿನಾಂಕ 11-06-2023ರಿಂದ ಜಾರಿಗೆ ಬರುವಂತೆ ಶಕ್ತಿ ಯೋಜನೆಯಡಿ ಮಹಿಳಾ ಪ್ರಯಾಣಿಕರಿಗೆ (ವಿದ್ಯಾರ್ಥಿನಿಯರನ್ನು ಒಳಗೊಂಡಂತೆ) ಹಾಗೂ ಲಿಂಗತ್ವ ಅಲ್ಪಸಂಖ್ಯಾತರಿಗೆ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ. |
| ಆ. | 15 ವರ್ಷಗಳಿಗಿಂತ ಹಳೆಯ ವಾಹನಗಳು ರಾಜ್ಯದ ಹಳ್ಳಿಗಳ ವ್ಯಾಪ್ತಿಯಲ್ಲಿ ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ಈ ಕುರಿತು ಸರ್ಕಾರದ ನಿಲುವೇನು; | ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕ.ರಾ.ರ.ಸಾ.ನಿಗಮ, ಬೆಂ.ಮ.ಸಾ.ಸಂಸ್ಥೆ, ವಾ.ಕ.ರ.ಸಾ.ಸಂಸ್ಥೆ ಮತ್ತು ಕ.ಕ.ರ.ಸಾ.ನಿಗಮಗಳಲ್ಲಿ ಕೇಂದ್ರ ಸರ್ಕಾರದ ಆದೇಶದನ್ವಯ 15 ವರ್ಷಗಳಿಗಿಂತ ಹಳೆಯ ವಾಹನಗಳ ನೋಂದಣಿ ಪ್ರಮಾಣ ಪತ್ರ ರದ್ದತಿಗೊಂಡಿರುವ ಹಿನ್ನೆಲೆಯಲ್ಲಿ, ಸದರಿ ವಾಹನಗಳ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಲಾಗಿದ್ದು, ಈ ರೀತಿಯ ವಾಹನಗಳನ್ನು ಕಾರ್ಯಾಚರಣೆಯನ್ನು ಮಾಡುತ್ತಿರುವುದಿಲ್ಲ. |

| | | | |
|---|---|---|---|
| | | 2021-22 | 225.82 |
| | | 2022-23 (ಅಂದಾಜು) | 72.33 |

ಸಂಖ್ಯೆ: ಟಿಡಿ 80 ಟಿಸಿಕ್ಯೂ 2023

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು